# ಮೈಸೂರು ವಿಶ್ವವಿದ್ಯಾನಿಲಯ

(ನ್ಯಾಕ್ ಸಂಸ್ಥೆಯ ಮರು ಮಾನ್ಯತೆಯಲ್ಲಿ 'ಎ' ಗ್ರೇಡ್ ಪಡೆದಿದೆ)

(ಎನ್.ಐ.ಆರ್.ಎಫ್-2024: ರಾಜ್ಯ ಸಾರ್ವಜನಿಕ ವಿಶ್ವವಿದ್ಯಾನಿಲಯ ವರ್ಗದಲ್ಲಿ 19ನೇ ಸ್ಥಾನ, ವಿಶ್ವವಿದ್ಯಾನಿಲಯ ವರ್ಗದಲ್ಲಿ 54ನೇ ಸ್ಥಾನ ಮತ್ತು ಒಟ್ಟಾರೆ ವರ್ಗದಲ್ಲಿ 86ನೇಸ್ಥಾನ)

ಸಂಖ್ಯೆ: ವಿಘ2/39/2022-23/1517

ಉಪಕುಲಸಚಿವರ ಕಛೇರಿ
ಪರಿಶಿಷ್ಟಜಾತಿ ಮತ್ತು ಪರಿಶಿಷ್ಟ ಪಂಗಡ ವಿಶೇಷ ಘಟಕ
ಮಹಾರಾಜ ಕಾಲೇಜು ಶತಮಾನೋತ್ಸವ ಭವನ
ಮೈಸೂರು-570 005
**ದಿನಾಂಕ: 25.03.2026**

## ಪ್ರಕಟಣೆ

**ವಿಷಯ: ಡಾ. ಬಿ.ಆರ್. ಅಂಬೇಡ್ಕರ್ ರವರ 135ನೇ ಜನ್ಮ ಜಯಂತಿ ಕಾರ್ಯಕ್ರಮದ ಅಂಗವಾಗಿ 2025-26ನೇ ಸಾಲಿನಲ್ಲಿ ಪಿಹೆಚ್.ಡಿ. ಪದವಿ ಪಡೆದ ಸಂಶೋಧಕರು ಮತ್ತು ಸ್ನಾತಕ ಮತ್ತು ಸ್ನಾತಕೋತ್ತರ ವಿಭಾಗಗಳಲ್ಲಿ ಪ್ರಥಮ ರ್‍ಯಾಂಕ್ ಪಡೆದಿರುವ ಪರಿಶಿಷ್ಟಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳು ಅಭಿನಂದನಾ ಸಮಾರಂಭಕ್ಕೆ ಹೆಸರನ್ನು ನೋಂದಾಯಿಸಿಕೊಳ್ಳುವ ಬಗ್ಗೆ.**

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಮೈಸೂರು ವಿಶ್ವವಿದ್ಯಾನಿಲಯದ ಪರಿಶಿಷ್ಟಜಾತಿ ಮತ್ತು ಪರಿಶಿಷ್ಟ ಪಂಗಡ ವಿಶೇಷ ಘಟಕದ ವತಿಯಿಂದ **ದಿನಾಂಕ: 14.04.2026** ರಂದು ಡಾ. ಬಿ.ಆರ್. ಅಂಬೇಡ್ಕರ್ ರವರ 135ನೇ ಜನ್ಮ ಜಯಂತಿ ಕಾರ್ಯಕ್ರಮದ ಅಂಗವಾಗಿ ಮೈಸೂರು ವಿಶ್ವವಿದ್ಯಾನಿಲಯದ ಅಧೀನಕ್ಕೊಳಪಡುವ ವಿಭಾಗಗಳು ಮತ್ತು ಕಾಲೇಜುಗಳಲ್ಲಿ ಪಿಹೆಚ್.ಡಿ. ಪದವಿ ಪಡೆದ ಸಂಶೋಧಕರು ಮತ್ತು ಸ್ನಾತಕ ಮತ್ತು ಸ್ನಾತಕೋತ್ತರ ಪದವಿಗಳಲ್ಲಿ ಪ್ರಥಮ ರ್‍ಯಾಂಕ್ ಪಡೆದಿರುವ ವಿದ್ಯಾರ್ಥಿಗಳನ್ನು ಸನ್ಮಾನಿಸಲು ಅಭಿನಂದನಾ ಸಮಾರಂಭವನ್ನು ಏರ್ಪಡಿಸಲಾಗಿದೆ.

ಆದುದರಿಂದ, 2025-26ನೇ ಸಾಲಿನಲ್ಲಿ ಪಿಹೆಚ್.ಡಿ. ಪದವಿ ಪಡೆದ ಸಂಶೋಧಕರು ಹಾಗೂ ಸ್ನಾತಕ ಮತ್ತು ಸ್ನಾತಕೋತ್ತರ ಪದವಿಗಳಲ್ಲಿ ಪ್ರಥಮ ರ್‍ಯಾಂಕ್ ಪಡೆದಿರುವ ಪರಿಶಿಷ್ಟಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳು ಪಿಹೆಚ್.ಡಿ ಅಧಿಸೂಚನೆ, ಸ್ನಾತಕ/ಸ್ನಾತಕೋತ್ತರ ಪದವಿಯ ರ್‍ಯಾಂಕ್ ಪ್ರಮಾಣ ಪತ್ರ ಹಾಗೂ ಜಾತಿ ಪ್ರಮಾಣ ಪತ್ರಗಳೊಂದಿಗೆ **ದಿನಾಂಕ: 13.04.2026ರೊಳಗೆ "ಉಪಕುಲಸಚಿವರು, ಪರಿಶಿಷ್ಟಜಾತಿ ಮತ್ತು ಪರಿಶಿಷ್ಟ ಪಂಗಡ ವಿಶೇಷ ಘಟಕ, ಮಹಾರಾಜ ಕಾಲೇಜು ಶತಮಾನೋತ್ಸವ ಭವನದ ಕಟ್ಟಡ, ಮೈಸೂರು"** ಇಲ್ಲಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳುವಂತೆ ಈ ಮೂಲಕ ಕೋರಲಾಗಿದೆ.

ತಮ್ಮ ನಂಬುಗೆಯ

K.N. 26/3/26

ಉಪಕುಲಸಚಿವ

ಪ್ರತಿ:

1. ಅಧ್ಯಕ್ಷರು/ನಿರ್ದೇಶಕರು ಎಲ್ಲಾ ಅಧ್ಯಯನ ವಿಭಾಗಗಳು, ಮಾನಸಗಂಗೋತ್ರಿ, ಮೈಸೂರು
2. ಪ್ರಾಂಶುಪಾಲರು, ಮಹಾರಾಜ/ಯುವರಾಜ/ವಿಶ್ವವಿದ್ಯಾನಿಲಯ ಸಂಜೆ ಕಾಲೇಜು/ ಲಲಿತ ಕಲಾ ಕಾಲೇಜು ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು
3. ಆಡಳಿತಾಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮಾನಸಗಂಗೋತ್ರಿ, ಮೈಸೂರು
4. ಮಾನ್ಯ ಕುಲಪತಿಯವರ/ಕುಲಸಚಿವರ/ಕುಲಸಚಿವರು(ಪರೀಕ್ಷಾಂಗ) ರವರ ಆಪ್ತಸಹಾಯಕರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು
5. ಕಛೇರಿ ಪ್ರತಿ